ಅ) ವೈದ್ಯಕೀಯ ಮಹಾವಿದ್ಯಾಲಯ, ಬಳ್ಳಾರಿಯಲ್ಲಿ ಭಾರತೀಯ ವೈದ್ಯಕೀಯ ಪರಿಷತ್ತಿನವರು ಅನ್‌ಸ್ಥಿಷಿಯಾಲಜಿ ವಿಭಾಗದಲ್ಲಿ ಸ್ನಾತಕೋತ್ತರ ವಿಭಾಗವನ್ನು ಪ್ರಾರಂಭಿಸಲು ನಿರ್ಧರಿಸಿದ್ದಾರೆಯೇ?

ಆ) ಮೇಲಿನ ಸ್ನಾತಕೋತ್ತರ ಕೋರ್ಸಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗದ ಬಗ್ಗೆ ಕಾರಣವನ್ನು ದಯವಿಟ್ಟು ತಿಳಿಸುತ್ತೀರಾ?

ಶ್ರೀಮತಿ ಕೆ.ಎಸ್. ನಾಗರತ್ನಮ್ಮ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು):

ಅ) ಭಾರತೀಯ ವೈದ್ಯಕೀಯ ಪರಿಷತ್ತಿನ ಅನುಮತಿಯನ್ನು ನಿರೀಕ್ಷಿಸಲಾಗುತ್ತಿದೆ.

ಆ) ಮೇಲಿನ ಸ್ನಾತಕೋತ್ತರ ಕೋರ್ಸಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 6-3-91ರ ಲಿಖಿತಮೂಲಕ ಉತ್ತರಿಸುವ 3ನೇ ಪಟ್ಟಿಯಲ್ಲಿನ 93 ಪ್ರಶ್ನೆಗಳ ಪೈಕಿ ಸಂಖ್ಯೆ 726, 685, 688, 6899, 772, 748, 711, 698, 298, 771, 716, 107, 43, 741, 742, 743, 740, 705, 287, 493, 701, 172 ಮತ್ತು 745 ಪ್ರಶ್ನೆಗಳನ್ನು ಹೊರತುಪಡಿಸಿ ಇನ್ನುಳಿದ 70ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಸಭೆಯಮುಂದೆ ಮಂಡಿಸುತ್ತೇನೆ.

ರಾಜ್ಯದ ಖಾಸಗಿ ಶಾಲೆಗಳಲ್ಲಿ ಡೊನೇಷನ್ ಹಾವಳಿ ವಿಪರೀತವಾಗಿ ಸಾಮಾನ್ಯ ಜನರು ಮಕ್ಕಳನ್ನು ಶಾಲೆಗೆ ಕಳುಹಿಸಲು ತೊಂದರೆಯಾಗಿರುವುದು

725 - ಶ್ರೀ ಎಲ್.ಆರ್. ಶಿವರಾಮೇಗೌಡ (ನಾಗಮಂಗಲ) : ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಖಾಸಗಿ ಶಾಲೆಗಳಲ್ಲಿ ಡೊನೇಷನ್ ಹಾವಳಿ ವಿಪರೀತವಾಗಿ ಸಾಮಾನ್ಯ ಜನರು ಮಕ್ಕಳನ್ನು ಶಾಲೆಗೆ ಕಳುಹಿಸಲು ಸಾಧ್ಯವಾಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಇದನ್ನು ತಡೆಗಟ್ಟಲು ಯಾವ ರೀತಿಯ ಕ್ರಮ ತೆಗೆದುಕೊಳ್ಳಲುದ್ದೇಶಿಸಲಾಗಿದೆ?

ಇ) ಕ್ಯಾಪಿಟೇಷನ್ ಶುಲ್ಕ ತೆಗೆದುಕೊಳ್ಳುವವರಮೇಲೆ ಸರ್ಕಾರ ಬಿಗಿ ಕ್ರಮ ತೆಗೆದುಕೊಳ್ಳಲು ಏನಾದರೂ ಕಾನೂನು ಇದೆಯೇ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮಂತ್ರಿಗಳು):

ಅ) ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಇದೆ. ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಕ್ಯಾಪಿಟೇಷನ್ ರದ್ದು) ಕಾಯ್ದೆ 1984ರ ಪ್ರಕಾರ ದಿನಾಂಕ 11-7-88ರಿಂದ ಯಾವುದೇ ಖಾಸಗಿ ಇಂಜನಿಯರಿಂಗ್ ಕಾಲೇಜು ಅಥವಾ ಪಾಲಿಟೆಕ್ನಿಕ್‌ಗಳಲ್ಲಿ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲು ಕ್ಯಾಪಿಟೇಷನ್ ತೆಗೆದುಕೊಳ್ಳುವ ಹಾಗಿಲ್ಲ. ಕ್ಯಾಪಿಟೇಷನ್ ಶುಲ್ಕ ತೆಗೆದುಕೊಂಡರೆ ಈ ಕಾಯ್ದೆಯ ಪ್ರಕಾರ ಶಿಕ್ಷೆಗೆ ಒಳಪಡಿಸಬಹುದು.